## ಶ್ರೀಸ್ಥಾನಿಕ ದ್ರಾವಿಡ ಬ್ರಾಹ್ಮಣ ಸಂಘ (ರಿ.), ಕುಂಜಿಬೆಟ್ಟು, ಉಡುಪಿ.

ವಿದ್ಯಾರ್ಥಿ ವೇತನ ವೇದಿಕೆ

### ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

ಸಂಘದ ವತಿಯಿಂದ 2008-09ನೇ ಸಾಲಿನ ವಿದ್ಯಾರ್ಥಿವೇತನವನ್ನು ಈ ವರ್ಷದ ವಿಜಯದಶಮಿಯಂದು ವಿತರಿಸಲಾಗುವುದು. ಪದವಿಪೂರ್ವ, ಪದವಿ, ಸ್ನಾತಕೋತ್ತರ, ಡಿ.ಎಡ್., ಬಿ.ಎಡ್., ಡಿಪ್ಲೋಮಾ, ಇಂಜಿನಿಯರಿಂಗ್, ವೈದ್ಯಕೀಯ, ವೇದ ತರಗತಿಗಳಲ್ಲಿ ಕಲಿಯುತ್ತಿರುವ, ಹೆತ್ತವರ ಆದಾಯವು ರೂ.60,000/-ಕ್ಕೆ ಮೀರದ (ಅರ್ಜಿ ಸಲ್ಲಿಸುವಾಗ ಈ ವಿಚಾರವನ್ನು ಅಭ್ಯರ್ಥಿಗಳು ದಯವಿಟ್ಟು ಗಮನಿಸಬೇಕು) ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿಯ ಜೊತೆಯಲ್ಲಿ ಹಿಂದಿನ ತರಗತಿಯ ಅಂಕಪತ್ರ, ಹಾಗೂ ಪ್ರಸಕ್ತ ಕಲಿಯುತ್ತಿರುವ ಶಾಲೆಯ ಮುಖ್ಯಸ್ಥರ ಪ್ರಮಾಣಪತ್ರವನ್ನು ಒದಗಿಸಬೇಕು. ಅರ್ಜಿ ಫಾರಂಗಳು ಶ್ರೀಶಾರದಾ ಮಂಟಪದ ಕಛೇರಿಯಲ್ಲಿ ಲಭ್ಯವಿದೆ. ಅರ್ಜಿ ಫಾರಂಗಳನ್ನು ತುಂಬಿಸಿ ಸಂಬಂಧಪಟ್ಟ ಕಡತಗಳೊಂದಿಗೆ ತಾ.25-09-2008ರ ಒಳಗೆ ಸಂಘದ ಕಛೇರಿಗೆ ಕಳುಹಿಸುವುದು.

## ದಿವಂಗತ ಕೆ. ಭಾಗೀರಥಿ ದಾಮೋದರ ಶಾಸ್ತ್ರಿ ಪ್ರತಿಷ್ಠಾನ, ಕುಳ್ಯಾ ವಿದ್ಯಾರ್ಥಿ ಪುರಸ್ಕಾರ

### ಪ್ರಕಟಣೆ

2007-2008ರ ಶೈಕ್ಷಣಿಕ ವರ್ಷದ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಅಂತಿಮ ಪರೀಕ್ಷೆಯಲ್ಲಿ ಶೇಕಡಾ 85ಕ್ಕೂ ಹೆಚ್ಚು ಅಂಕ ಪಡೆದ ವಿದ್ಯಾರ್ಥಿ-ವಿದ್ಯಾರ್ಥಿನಿಯರನ್ನು, ಶ್ರೀ ಸುಬ್ರಹ್ಮಣ್ಯ ಸಭಾ, ಬಿಜೈ ಮಂಗಳೂರು ಇಲ್ಲಿ ದಿನಾಂಕ 07-09-2008 ಭಾನುವಾರ ಶ್ರೀಕೃಷ್ಣಜನ್ಮಾಷ್ಟಮಿಯ ಪ್ರಯುಕ್ತ ನಡೆಯುವ ಕಾರ್ಯಕ್ರಮದಂದು ಪುರಸ್ಕರಿಸಲಾಗುವುದು. ದ.ಕ. ಮತ್ತು ಉಡುಪಿ ಜಿಲ್ಲೆಯ ಅರ್ಹ ವಿದ್ಯಾರ್ಥಿಗಳು ತಮ್ಮ ವಿಳಾಸ ಮತ್ತು ಅಂಕ ಪಟ್ಟಿಯ ಯಥಾ ನಕಲನ್ನು ದಿನಾಂಕ 29-08-2008ರ ಒಳಗಾಗಿ ಶ್ರೀ ಸುಬ್ರಹ್ಮಣ್ಯ ಸಭೆಯ ಕಾರ್ಯದರ್ಶಿಯವರಿಗೆ ತಲುಪಿಸಬೇಕಾಗಿ ಕೋರಲಾಗಿದೆ.

ಪ್ರತಿಷ್ಠಾನದ ಪರವಾಗಿ **ಕೆ. ಸದಾಶಿವ ಶಾಸ್ತ್ರಿ**

## ಶ್ರೀ ಸುಬ್ರಹ್ಮಣ್ಯ ಸಭಾ (ರಿ.)

**ಕುಡ್ಪಿ ಭುಜಂಗಯ್ಯ ಗಾರ್ಡನ್ಸ್, ಬಿಜೈ ರಸ್ತೆ, ಮಂಗಳೂರು - 3**

ಪ್ರಿಯ ಬಾಂಧವರೇ

ತಾ.07-09-2008ನೇ ಆದಿತ್ಯವಾರ

**ಶ್ರೀಕೃಷ್ಣ ಜನ್ಮಾಷ್ಟಮಿ ಆಚರಣೆ** ಅಂಗವಾಗಿ

ವಿವಿಧ ಕಾರ್ಯಕ್ರಮಗಳನ್ನು ಶ್ರೀ ಸುಬ್ರಹ್ಮಣ್ಯ ಸಭೈಯಲ್ಲಿ ಆಯೋಜಿಸಿದ್ದೇವೆ.

ಬೆಳಿಗ್ಗೆ 9-30ರಿಂದ 10-30 : ಶ್ರೀ ವಿಷ್ಣು ಸಹಸ್ರನಾಮ,
ಶ್ರೀ ಲಲಿತಾ ಸಹಸ್ರನಾಮ ಪಾರಾಯಣ

10-30ರಿಂದ 12-00 : ವಿವಿಧ ಸ್ಪರ್ಧೆಗಳು

1. ಶ್ರೀಕೃಷ್ಣ ವೇಷ ಸ್ಪರ್ಧೆ : **5 ವರ್ಷಗಳ ಒಳಗಿನ ಚಿಣ್ಣರಿಗೆ**
   **6 ರಿಂದ 10 ವರ್ಷಗಳ ಎಳೆಯರಿಗೆ**
2. ಶ್ರೀ ಮದ್ಭಗವದ್ಗೀತೆಯ 4ನೆಯ ಅಧ್ಯಾಯದ ಪ್ರಾರಂಭದ 10 ಶ್ಲೋಕಗಳ ಕಂಠಪಾಠ ಸ್ಪರ್ಧೆ 5ರಿಂದ 10ವರ್ಷಗಳ ತನಕದ ವಯೋಮಾನದವರಿಗಾಗಿ
   11 ರಿಂದ 16 ವರ್ಷಗಳ ತನಕದ ವಯೋಮಾನದವರಿಗಾಗಿ
   16 ರಿಂದ ಮೇಲ್ಪಟ್ಟ ವಯೋಮಾನದವರಿಗಾಗಿ

| | | |
|---|---|---|
| ಮಧ್ಯಾಹ್ನ | 12-00 ರಿಂದ 1-00ರ ವರೆಗೆ | : **ಶ್ರೀಕೃಷ್ಣನ ಬಗ್ಗೆ ರಸಪ್ರಶ್ನೆ** |
| | 1-00ರಿಂದ 2-00 | : **ಭೋಜನ** |
| | 2-00ರಿಂದ 2-20 | : **ಪ್ರತಿಭಾ ಪುರಸ್ಕಾರ** |
| | 2-20ರಿಂದ 3-00 | : **ಮಡಕೆ ಒಡೆಯುವ ಸ್ಪರ್ಧೆ** |
| | 3-00 ರಿಂದ 5-00 | : **ಸಾಂಸ್ಕೃತಿಕ ಕಾರ್ಯಕ್ರಮ** |

ದಯವಿಟ್ಟು ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದು ಕಾರ್ಯಕ್ರಮಗಳನ್ನು ಚಂದಗಾಣಿಸಿ ಕೊಡಬೇಕಾಗಿ ವಿನಂತಿ.

**ಅಧ್ಯಕ್ಷರು ಮತ್ತು ಆಡಳಿತ ಮಂಡಳಿ,** ಶ್ರೀ ಸುಬ್ರಹ್ಮಣ್ಯ ಸಭಾ (ರಿ.), **ಮಂಗಳೂರು.**

## ಶ್ರೀಸ್ಥಾನಿಕ ದ್ರಾವಿಡ ಬ್ರಾಹ್ಮಣ ಸಂಘ (ರಿ.), ಕುಂಜಿಬೆಟ್ಟು, ಉಡುಪಿ.

ಪತಂಜಲಿ ಯೋಗಪೀಠ ಇದರ ತತ್ವಾಧಾರಿತ

ಯೋಗ ಪ್ರಶಿಕ್ಷಣ ಕೇಂದ್ರ ಹರಿದ್ವಾರ ಇದರ ಉಡುಪಿ ಶಾಖೆಯ ಯೋಗಶಿಕ್ಷಕರಿಂದ

### ಉಚಿತ ಯೋಗ ಹಾಗೂ ಪ್ರಾಣಾಯಾಮ ಶಿಬಿರವು

**ತಾ.18-08-2008ರಿಂದ ತಾ.24-08-2008ರ ವರೆಗೆ ಪ್ರತಿದಿನ ಸಂಜೆ 6ರಿಂದ 7 ಗಂಟೆಯ ತನಕ ಸಮಾಜ ಬಾಂಧವರು ಮತ್ತು ಸಾರ್ವಜನಿಕರಿಗೆ ಉಡುಪಿ ಕುಂಜಿಬೆಟ್ಟಿನ ಶ್ರೀಶಾರದಾ ಮಂಟಪದ ಜ್ಞಾನಮಂದಿರದಲ್ಲಿ ನಡೆಯಲಿರುವುದು.**

*ಆಸಕ್ತರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕಾಗಿ ವಿನಂತಿ*

ಸಂಪರ್ಕ ವಿಳಾಸ : **ಉಮಾನಾಥ ಶೆಣೈ, ಉಪನ್ಯಾಸಕರು, ಎಂ.ಐ.ಟಿ. (ಮೊಬೈಲ್ : 98864 23623)**
**ಅಜಿತ್, ಮೆನೇಜರ್, ಶಾರದಾ ಮಂಟಪ. ಮೊಬೈಲ್ : 94481 08920**

-ಕಾರ್ಯದರ್ಶಿ

## ಸ್ಥಾನಿಕ ದ್ರಾವಿಡ ಬ್ರಾಹ್ಮಣ ಸಂಘ

## ಉದಯಚಂದ್ರ, ಪ್ರತಿಭಾ ಪುರಸ್ಕಾರ 2008-09

ಸಂಘದ ಯುವವೇದಿಕೆಯ ಆಶ್ರಯದಲ್ಲಿ ನಮ್ಮ ಸಮಾಜದ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಉದಯಚಂದ್ರ ಸ್ಮಾರಕ ಪುರಸ್ಕಾರ ನೀಡಿ ಪುರಸ್ಕರಿಸಲು ನಿಶ್ಚಯಿಸಲಾಗಿದೆ. 2007-08ನೇ ಸಾಲಿನ ಎಸ್.ಎಸ್.ಎಲ್.ಸಿ., ಪದವಿಪೂರ್ವ (ಮೂರು ವಿಭಾಗ) ತರಗತಿಗಳ ಅಂತಿಮ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿ ಮತ್ತು ಪದವಿ, ಸ್ನಾತಕೋತ್ತರ, ವೈದ್ಯಕೀಯ, ಕಾನೂನು, ಇಂಜಿನಿಯರಿಂಗ್‌ಗಳಲ್ಲಿ ರ‍್ಯಾಂಕ್ ಪಡೆದ ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಗುವುದು. ಆದ್ದರಿಂದ ಶೇಕಡಾ 80ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು 25-09-2008ರ ಒಳಗೆ ಅಂಕಪಟ್ಟಿಯ ಪ್ರತಿ ಮತ್ತು ಇತರ ಮಾಹಿತಿಯೊಂದಿಗೆ ಅರ್ಜಿ ಕಳುಹಿಸಿ ಕೊಡಬೇಕು. ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ.ಯಲ್ಲಿಯೂ 80%*ಕ್ಕಿಂತ ಹೆಚ್ಚು ಅಂಕಗಳಿಸಿದವರು ಮಾತ್ರ ಅರ್ಜಿ ಕಳುಹಿಸುವುದು. ಪದವಿ ಮತ್ತು ಇತರ ವಿಭಾಗಗಳಲ್ಲಿ ರ‍್ಯಾಂಕ್‌ಗಳಿಸಿದ ಬಗ್ಗೆ ಅಧಿಕೃತ ದಾಖಲೆಗಳನ್ನು ಕಳುಹಿಸಬೇಕು.

ಅರ್ಜಿಯನ್ನು "ಸಂಚಾಲಕರು, ಯುವವೇದಿಕೆ, ಸ್ಥಾನಿಕ ದ್ರಾವಿಡ ಬ್ರಾಹ್ಮಣ ಸಂಘ, ಶ್ರೀ ಶಾರದಾ ಮಂಟಪ, ಕುಂಜಿಬೆಟ್ಟು ಉಡುಪಿ - 576 102" ಇಲ್ಲಿಗೆ ಕಳುಹಿಸಬೇಕು. ಅರ್ಜಿಯಲ್ಲಿ ಅವಶ್ಯವಾಗಿ ತಮ್ಮ ದೂರವಾಣಿ ಸಂಖ್ಯೆಯನ್ನು ನಮೂದಿಸಬೇಕು. ವಿಜಯದಶಮಿಯಂದು ಸಂಜೆ ಪ್ರತಿಭಾ ಪುರಸ್ಕಾರ ವಿತರಿಸಲಾಗುವುದು.

**- ಸಂಚಾಲಕರು, ಯುವವೇದಿಕೆ.**

*(ಎಸ್‌ಎಸ್‌ಎಲ್‌ಸಿ. ಹಾಗೂ ಪಿಯುಸಿ ವಿಭಾಗದಲ್ಲಿ ಅತಿ ಹೆಚ್ಚು ಅಂಕ ಪಡೆದ ಒಬ್ಬೊಬ್ಬರಿಗೆ ಮಾತ್ರ ಪುರಸ್ಕಾರ ನೀಡಲಾಗುವುದು.)

## ಶ್ರೀ ಸ್ಥಾನಿಕ ದ್ರಾವಿಡ ಬ್ರಾಹ್ಮಣ ಸಂಘ (ರಿ.), ಕುಂಜಿಬೆಟ್ಟು, ಉಡುಪಿ

### ಚಾತುರ್ಮಾಸದಲ್ಲಿ ಗುರುಗಳ ಭೇಟಿ

**ಕಳೆದ ಚಾತುರ್ಮಾಸವನ್ನು ಮುಂಬೈಯಲ್ಲಿ ಆಚರಿಸಿದ ನಮ್ಮ ಕುಲಗುರುಗಳಾದ ದಕ್ಷಿಣಾಮ್ನಾಯ ಶ್ರೀ ಕ್ಷೇತ್ರ ಶೃಂಗೇರಿಯ ಜಗದ್ಗುರು ಶ್ರೀ ಭಾರತೀ ತೀರ್ಥ ಮಹಾ ಸನ್ನಿಧಾನಂಗಳವರನ್ನು ಈ ವರ್ಷ ಚಾತುರ್ಮಾಸದ ಅವಧಿಯಲ್ಲಿ ಶ್ರೀ ಕ್ಷೇತ್ರ ಶೃಂಗೇರಿಯಲ್ಲಿಯೇ ಸಮಾಜ ಬಾಂಧವರು ಜೊತೆಯಾಗಿ ಸೇರಿ ಗುರುಗಳ ದರ್ಶನ ಪಡೆಯಲು ಉದ್ದೇಶಿಸಲಾಗಿದೆ.**

**ಶ್ರೀ ಗುರುಗಳೇ ಈ ಹಿಂದೆ ನೀಡಿದ ಆದೇಶದಂತೆ ಗಣೇಶ ಚತುರ್ಥಿಯ ಹಿಂದಿನ ಭಾನುವಾರ ಎಂದರೆ ತಾ.31-08-2008ರಂದು ಶ್ರೀ ಗುರುಗಳ ಆಶೀರ್ವಾದಕ್ಕಾಗಿ ತೆರಳುವುದೆಂದು ಉಡುಪಿಯ ಸ್ಥಾನಿಕ ದ್ರಾವಿಡ ಬ್ರಾಹ್ಮಣ ಸಂಘವು ನಿಶ್ಚಯಿಸಿದೆ. ಅದಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜ ಬಾಂಧವರು ಆಗಮಿಸಬೇಕೆಂದು ಉಡುಪಿಯ ಸ್ಥಾನಿಕ ದ್ರಾವಿಡ ಬ್ರಾಹ್ಮಣ ಸಂಘದ ಪದಾಧಿಕಾರಿಗಳು ಕರೆನೀಡಿದ್ದಾರೆ. ಆಸಕ್ತರು ಶಾರದಾ ಮಂಟಪದ ಮೆನೇಜರ್‌ರಲ್ಲಿ ಮುಂಗಡ ರೂ.100ನ್ನು ನೀಡಿ ಹೆಸರು ನೋಂದಾಯಿಸಿ ಸಹಕರಿಸಬೇಕಾಗಿ ವಿನಂತಿ. (ದೂರವಾಣಿ: 2520754)**

**- ಕಾರ್ಯದರ್ಶಿ**

## ಸುಬ್ರಹ್ಮಣ್ಯ ಸಭಾ ಮಂಗಳೂರು

### ಚಾತುರ್ಮಾಸದಲ್ಲಿ ಗುರುಗಳ ಭೇಟಿ

ತಾ.31-08-2008 ರಂದು ಆದಿತ್ಯವಾರ ಸುಬ್ರಹ್ಮಣ್ಯ ಸಭಾ ವತಿಯಿಂದ ಶ್ರೀಕ್ಷೇತ್ರ ಶೃಂಗೇರಿಗೆ ತೆರಳಿ ಚಾತುರ್ಮಾಸ ವ್ರತದಲ್ಲಿರುವ ಶೃಂಗೇರಿ ಶಾರದಾ ಪೀಠಾಧೀಶ್ವರ ಶ್ರೀ ಶ್ರೀ ಭಾರತೀತೀರ್ಥ ಮಹಾಸನ್ನಿದಾನಂಗಳವರನ್ನು ಭೇಟಿಮಾಡಿ ಆಶೀರ್ವಾದ ಪಡೆಯುವುದೆಂದು ನಿಶ್ಚಯಿಸಲಾಗಿದೆ. ಆ ಪ್ರಯುಕ್ತ ಅಂದು ಬೆಳಿಗ್ಗೆ 6-30ಕ್ಕೆ ಮಂಗಳೂರಿನ ಸುಬ್ರಹ್ಮಣ್ಯ ಸಭಾದಿಂದ ಸೂಕ್ತವಾಹನ ವ್ಯವಸ್ಥೆ ಮಾಡಿ ಹೊರಡುವುದರಿಂದ ಆಸಕ್ತರು ತಮ್ಮ ಹೆಸರನ್ನು ಬೇಗನೆ ನೊಂದಾಯಿಸಿಕೊಳ್ಳಬೇಕೆಂದು ವಿನಂತಿಸಲಾಗಿದೆ.

**ಪ್ರಯಾಣ ವೆಚ್ಚ ರೂ.150/-**

| ಕರುಣ್ ರಾವ್ ಬೆಳ್ಳೆ | ಅನಿಲ್ ರಾವ್ ಬಿ.ಪಿನ್ | ಚೇತನ್ ಶರ್ಮ |
|---|---|---|
| 92433 09120 | 98800 37110 | 98441 187083 |

## ದೇವಿಕೃಪಾ ಏಜೆನ್ಸೀಸ್, ನಂದಿಕೂರು

ಫೋನ್ : 2556536 (R), 2555466 (0)



**ಶಾಂತಲಾ 100 ಅಗರ್ ಬತ್ತಿಯ ಮುಖ್ಯ ವಿತರಣೆಗಾರರು ಹಾಗೂ ಕರ್ಪೂರ, ಲೋಬಾನ ಮುಂತಾದವುಗಳ ರಖಂ ವ್ಯಾಪಾರಸ್ಥರು.**

**ಪ್ರೊ। ಎಸ್. ಜನಾರ್ದನ್ ರಾವ್**

ದೇವಿಕೃಪಾ, ನಂದಿಕೂರು, ಉಡುಪಿ ತಾಲೂಕು

## ಸದಾಶಯ

ಸ್ಥಾನಿಕ ಬ್ರಾಹ್ಮಣ ವಧೂ-ವರರ ಮಾಹಿತಿ ಕೇಂದ್ರ

ಚಿಟ್ಪಾಡಿ, ಉಡುಪಿ.

**: ಹೆಚ್ಚಿನ ವಿವರಗಳಿಗೆ ಸಂಪರ್ಕಿಸಿರಿ :**

**ಎಂ. ಸದಾನಂದರಾವ್ ಮತ್ತು ಎಂ. ಸಂತೋಷರಾವ್, ಚಿಟ್ಪಾಡಿ, ಉಡುಪಿ**

Ph : 2522638, 2523394

Owned & Published by ·. Y. Bhuvanendra Rao, Secretary Sthanika Dravida Brahmana Sangha (R.), Shri Sharada Mantapa, Kunjibettu, Udupi - 576 102. Ph : 0820-2520754
Edited by Y. Mohan Rao, Designed @ SriNidhi Computer Graphics, Bailur, Udupi, Printed at Agrahara Offsets, Udupi - 576 101. E-mail : srisharadaudupi@yahoo.co.in Website : www.srisharada.org